# ಕರ್ನಾಟಕ ಸರ್ಕಾರ

**(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)**

**3ನೇ ಮಹಡಿ, ಬಹುಮಹಡಿ ಕಟ್ಟಡ, ಡಾ|| ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು**

---

ಸಂಖ್ಯೆ.ಕಪಂರಾಅ:ಅಭಿವೃದ್ಧಿ:143:2021 ದಿನಾಂಕ: 18.03.2021.

## ಸುತ್ತೋಲೆ

**ವಿಷಯ:** ಗ್ರಾಮ ಮಟ್ಟದಲ್ಲಿ ಕೋವಿಡ್-19 ಲಸಿಕೆ ಕಾರ್ಯಕ್ರಮದ ಯಶಸ್ವಿ ಅನುಷ್ಠಾನ ಕುರಿತು.

**ಉಲ್ಲೇಖ:1** ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 73 ಗ್ರಾಪಂಕಾ 2020, ದಿನಾಂಕ: 06-03-2020, 21-03-2020 ಮತ್ತು 23-03-2020.

2 ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 86 ಉಖಾಯೋ 2019, ದಿನಾಂಕ: 27-03-2020.

********

ಕೋವಿಡ್-19 (ಕೊರೊನಾ ವೈರಸ್) ಖಾಯಿಲೆಯು ಸಾಂಕ್ರಾಮಿಕ ರೋಗವಾಗಿದ್ದು, ಈ ಖಾಯಿಲೆಯನ್ನು ನಿಯಂತ್ರಿಸಲು ಹಾಗೂ ಒಬ್ಬರಿಂದ ಒಬ್ಬರಿಗೆ ಹರಡದಂತೆ ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವಾರು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿವೆ. ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಈ ಸೋಂಕು ಹರಡದಂತೆ ಗ್ರಾಮ ಪಂಚಾಯಿತಿಗಳ ವತಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖ(1) ರ ಸುತ್ತೋಲೆಗಳಲ್ಲಿ ವಿವರವಾದ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ. ಉಲ್ಲೇಖ (2) ರ ಸುತ್ತೋಲೆಯಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಕಾರ್ಯಪಡೆ ಹಾಗೂ ಗ್ರಾಮ ಮಟ್ಟದ ಕಾರ್ಯಪಡೆಯ ರಚನೆ ಹಾಗೂ ಜವಾಬ್ದಾರಿಗಳ ಬಗ್ಗೆ ವಿವರವಾಗಿ ತಿಳಿಸಲಾಗಿರುತ್ತದೆ.

ಕೋವಿಡ್-19 ತಡೆಗಟ್ಟುವ ನಿಟ್ಟಿನಲ್ಲಿ ಭಾರತ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದಲ್ಲಿ ಜನವರಿ 16 ರಿಂದ ಪ್ರಾರಂಭಗೊಂಡು ಆರೋಗ್ಯ ಹಾಗೂ ಕೊರೊನಾ ಮುಂಚೂಣಿ ಕಾರ್ಯಕರ್ತರಿಗೆ ಕೋವಿಡ್-19 ಲಸಿಕಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮಾರ್ಚ್ 1, 2021 ರಿಂದ 60 ವರ್ಷ ಮೇಲ್ಪಟ್ಟ ವಯಸ್ಸಿನವರಿಗೆ ಹಾಗೂ ನಿರ್ದಿಷ್ಟ ಸಹಅಸ್ವಸ್ಥತೆ ಹೊಂದಿರುವ 45 ರಿಂದ 59 ವಯಸ್ಸಿನವರಿಗೆ ಲಸಿಕೆಯನ್ನು ನೀಡಲಾಗುತ್ತಿದೆ. ಗ್ರಾಮೀಣ ಪ್ರದೇಶದಲ್ಲಿ ಆರೋಗ್ಯ ಇಲಾಖೆಯಿಂದ ಪ್ರಾಥಮಿಕ ಆರೋಗ್ಯ ಕೇಂದ್ರ ಮೊದಲುಗೊಂಡು ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಹಾಗೂ ಆಯ್ದ ಖಾಸಗಿ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆಯನ್ನು ನೀಡಲು ಕ್ರಮ ವಹಿಸಲಾಗುತ್ತಿದೆ. ಈ ಲಸಿಕೆ ಕಾರ್ಯಕ್ರಮದ ವ್ಯಾಪ್ತಿಯನ್ನು ವಿಸ್ತರಿಸಲು ಮತ್ತು ವಿಶೇಷವಾಗಿ ಗ್ರಾಮ ಮಟ್ಟದಲ್ಲಿ ಫಲಾನುಭವಿಗಳಿಗೆ ಲಸಿಕೆ ದೊರಕಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಯೋಗದೊಂದಿಗೆ ಗ್ರಾಮ ಪಂಚಾಯಿತಿ ಕಾರ್ಯಪಡೆ ಹಾಗೂ ಗ್ರಾಮ ಮಟ್ಟದ ಕಾರ್ಯಪಡೆ ಒಗ್ಗೂಡಿ ಈ ಕೆಳಕಂಡ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮುಖಾಂತರ ಕೋವಿಡ್-19 ಲಸಿಕೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಲಾಗಿದೆ.

2—

ಕೋವಿಡ್-19 ವ್ಯಾಕ್ಸಿನೇಷನ್ ಅನ್ನು ಸುಗಮಗೊಳಿಸಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳು :

1) ಗ್ರಾಮೀಣ ಜನರಿಗೆ ಲಸಿಕೆ ಹಾಕಲು ಅನುಕೂಲವಾಗುವಂತೆ ಆಯಾ ಗ್ರಾಮದಲ್ಲಿನ 60 ವಯಸ್ಸು ದಾಟಿದ ಫಲಾನುಭವಿಗಳ ಪಟ್ಟಿಯನ್ನು ಗ್ರಾಮ ಪಂಚಾಯಿತಿ ಕಾರ್ಯಪಡೆಯು ಆರೋಗ್ಯ ಸಿಬ್ಬಂದಿಗೆ ಒದಗಿಸುವುದು.

2) ಗ್ರಾಮದ ನಿರ್ದಿಷ್ಟ ಸಹಅಸ್ವಸ್ಥತೆ ಹೊಂದಿರುವ 45 ವಯಸ್ಸು ದಾಟಿದ ಫಲಾನುಭವಿಗಳ ಪಟ್ಟಿಯನ್ನು ಆರೋಗ್ಯ ಇಲಾಖೆ ಸಿಬ್ಬಂದಿಗಳಿಂದ ಪಡೆದು ಅವರುಗಳಿಗೆ ಕೋವಿಡ್-19 ಲಸಿಕೆಯನ್ನು ನೀಡಲು ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಗ್ರಾಮ ಪಂಚಾಯಿತಿ ಕಾರ್ಯಪಡೆಯು ಅಗತ್ಯ ಕ್ರಮ ವಹಿಸುವುದು.

3) ಗ್ರಾಮ ಪಂಚಾಯಿತಿ ಕಾರ್ಯಪಡೆಯು ಗ್ರಾಮದಲ್ಲಿ ಲಸಿಕೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಹಾಯವಾಣಿ (ಹೆಲ್ಪ್ ಲೈನ್) ಯನ್ನು ಜಾರಿಗೊಳಿಸುವುದು ಹಾಗೂ ಗ್ರಾಮ ಪಂಚಾಯಿತಿಯೊಂದಿಗೆ ಯಾವಾಗ, ಎಲ್ಲಿ ಮತ್ತು ಹೇಗೆ ಎಂದು ಚರ್ಚಿಸಿ ಕೋವಿಡ್-19 ಲಸಿಕೆ ಕಾರ್ಯಕ್ರಮದ ವೇಳಾಪಟ್ಟಿಯೊಂದಿಗೆ ದಿನ, ಸಮಯ ಹಾಗೂ ಸ್ಥಳವನ್ನು ನಿಗದಿಗೊಳಿಸಿ ಪ್ರಚುರ ಪಡಿಸುವುದು.

4) ಕೋವಿಡ್-19 ಲಸಿಕೆ ಕಾರ್ಯಕ್ರಮವನ್ನು ಸುಗಮವಾಗಿ ನಡೆಸಲು ಚುನಾಯಿತ ಪ್ರತಿನಿಧಿಗಳು, ಗ್ರಾಮದ ಮುಖಂಡರು, ಸಮುದಾಯದ ಮುಖಂಡರು, ಧಾರ್ಮಿಕ ಮುಖಂಡರು, ಸ್ವಯಂಸೇವಕರು, ಸ್ವ-ಸಹಾಯ ಗುಂಪಿನ ಸದಸ್ಯರುಗಳನ್ನೊಳಗೊಂಡ ಸಭೆಗಳನ್ನು ನಡೆಸಿ ಅರಿವು ಮೂಡಿಸುವುದು.

5) ಲಸಿಕೆ ಕುರಿತು ಜಾಗೃತಿ ಮೂಡಿಸಲು ಒಬ್ಬರಿಂದ ಒಬ್ಬರಿಗೆ ಸಂವಹನಕ್ಕಾಗಿ ಕೊರೊನಾ ವಾರಿಯರ್ಸ್‌ಗಳನ್ನು ಗುರುತಿಸುವ ಕಾರ್ಯವನ್ನು ಗ್ರಾಮ ಪಂಚಾಯಿತಿ ಕಾರ್ಯಪಡೆ ನಿರ್ವಹಿಸುವುದು.

6) ಲಸಿಕೆಯ ಬಗೆಗಿನ ಜನರ ತಪ್ಪು ಕಲ್ಪನೆಗಳನ್ನು ನಿವಾರಿಸಲು ಸಭೆಗಳ ಮೂಲಕ ಗ್ರಾಮ ಪಂಚಾಯಿತಿ ಕಾರ್ಯಪಡೆಯು ಮಾಹಿತಿಗಳನ್ನು ನೀಡುವುದು. ಕೋವಿಡ್-19 ಲಸಿಕೆಗೆ ಸಂಬಂಧಿಸಿದಂತೆ ಸಂದೇಹಗಳಿಗೆ ಉತ್ತರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

7) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೋವಿಡ್-19 ಲಸಿಕಾ ಸತ್ರ (Session Sites / ಕಾರ್ಯಕ್ರಮಗಳನ್ನು ಆಯೋಜಿಸಲು ಗ್ರಾಮ ಪಂಚಾಯಿತಿ ಕಾರ್ಯಪಡೆಯು ಆರೋಗ್ಯ ಸಿಬ್ಬಂದಿಯನ್ನು ಬೆಂಬಲಿಸುವ ಕಾರ್ಯ ನಿರ್ವಹಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳನ್ನು ಒಳಗೊಳ್ಳುವಂತೆ ಯೋಜನೆಯನ್ನು ರೂಪಿಸುವುದು.

8) ಫಲಾನುಭವಿಗಳಿಗೆ ಲಸಿಕೆ ಪಡೆಯುವ ಸಲುವಾಗಿ ಅಗತ್ಯವಿದ್ದಲ್ಲಿ ಸ್ಥಳೀಯವಾಗಿ ಸಾರಿಗೆ ಸೌಲಭ್ಯಗಳಾದ ಆಟೋ, ವ್ಯಾನ್‌ಗಳು ಇತರೆ ವಾಹನಗಳನ್ನು ಬಾಡಿಗೆಗೆ ಪಡೆಯುವುದು ಮತ್ತು ಸ್ಥಳೀಯ ವಾಹನ ಮಾಲೀಕರ ಸಹಕಾರ ಪಡೆದು ಉಚಿತ ವಾಹನ ಸೇವೆ ನೀಡುವ ಕಾರ್ಯ ನಿರ್ವಹಿಸುವುದು.

9) ಸ್ವ ಸಹಾಯ ಗುಂಪುಗಳು, ಸಮುದಾಯ ಆಧಾರಿತ ಸ್ವಯಂ ಸಂಸ್ಥೆಗಳು, ಮಹಿಳಾ ಆರೋಗ್ಯ ಸಮಿತಿಯಂತಹ ಗುಂಪುಗಳೊಂದಿಗೆ ಗ್ರಾಮ ಪಂಚಾಯಿತಿ ಕಾರ್ಯಪಡೆಯು ಸಭೆಗಳನ್ನು ಆಯೋಜಿಸಿ ಜಾಗೃತಿ ಮೂಡಿಸುವುದು.

10) ಮೈಕಿಂಗ್, ಪೋಸ್ಟರ್, ಹೆಲ್ಪ್‌ಡೆಸ್ಕ್ ಮತ್ತು ಟಾಂಟಾಂ ಮೂಲಕ ಮಾಹಿತಿ ನೀಡಲು ಗ್ರಾಮ ಪಂಚಾಯಿತಿ ಕಾರ್ಯಪಡೆಯು ವ್ಯವಸ್ಥೆ ಕಲ್ಪಿಸುವುದು.